ದಿನಾಂಕಃ 11-07-2017 ರಂದು ಸಾಕ್ಷಿದಾರರಿಗೆ ಪ್ರಮಾಣ ವಚನ ಮಾಡಿಸಲಾಯಿತು.

**ಮುಖ್ಯ ವಿಚಾರಣೆ ಶ್ರೀ ಕೆ ಆರ್ ಐ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯ ಸಲುವಾಗಿ ಶಪಥ ಪತ್ರವನ್ನು ಹಾಜರುಪಡಿಸಿದ್ದೇನೆ. ಅದನ್ನು ನಮ್ಮ ವಕೀಲರು ನನ್ನ ಹೇಳಿಕೆಯ ಮೇರೆಗೆ ತಯಾರಿಸಿದ್ದಾರೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಎಲ್ಲಾ ಸಂಗತಿಗಳು ಸತ್ಯವಾಗಿದೆ, ಇದರಲ್ಲಿ ಇರುವ ಸಹಿ ನನ್ನದು.

ನಾನು ಈ ದಾವೆಯಲ್ಲಿ ಹಾಜರುಪಡಿಸಿರುವ ದಾಖಲೆಗಳನ್ನು ನೋಡಿದರೆ ಗುರುತಿಸುತ್ತೇನೆ. ದಿನಾಂಕ 09.4.1969 ರ ಕ್ರಯಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ನಿಪಿ 1 ಎಂದು, ಡಿಮ್ಯಾಂಡ್ ರಿಜಿಸ್ಟರ್‌ನ್ನು ನಿಪಿ 2 ಎಂದು, ತೆರಿಗೆ ಪಾವತಿ ರಸೀತಿಯನ್ನು ನಿಪಿ 3 ಎಂದು, ಪಂಚಾಯಿತಿಯವರು ನೀಡಿದ ಹಿಂಬರಹವನ್ನು ನಿಪಿ 4 ಎಂದು ಗುರುತಿಸಲಾಯಿತು.

ಪ್ರತಿವಾದಿ ಪರ ಪ್ರತಿವಾದ ಪತ್ರ ಸಲ್ಲಿಸಿಲ್ಲ, ಆದ್ದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

(ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಅನುಸಾರವಾಗಿ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಸಾ ಓ ಹೇ ಕೇ ಸ ಅದೆ.

ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾ.
ದಂಡಾಧಿಕಾರಿಗಳು, ಕೃಷ್ಣರಾಜಪೇಟೆ.